**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ವಿರಾಜಪೇಟೆ.**

**ಸಿ.ಸಿ. ಸಂಖ್ಯೆ : 77/2024**

**ಚಾಸಾ–7**

**ಫ್ರಾಸಾ–4**

| | | |
|---|---|---|
| **ಹೆಸರು** | : | ಸತ್ಯ |
| **ತಂದೆಯ ಹೆಸರು** | : | ಕುಂಞ್ಞಂಬು |
| **ವಯಸ್ಸು** | : | 53 ವರ್ಷ |
| **ಉದ್ಯೋಗ** | : | ಚಾಲಕ |
| **ವಾಸಸ್ಥಳ** | : | ಮಾಲ್ದಾರೆ ಗ್ರಾಮ |

**ದಿನಾಂಕ ಃ 21–01–2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಮಾನ್ಯ ಸ. ಸ. ಅ. ರವರಿಂದ ಃ –**

1. ಚಾಸಾ–6 ರವರ ಪರಿಚಯವಿರುವುದಿಲ್ಲ. ಆರೋಪಿ ಪರಿಚಯವಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಏನು ಗೊತ್ತಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ ಕ್ರಮ ಜರುಗಿಸಿ, ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಈ ಬಗ್ಗೆ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ದಿನಾಂಕ **18–11–2023** ರಂದು ಜರುಗಿಸಿದ ಮಹಜರಿನ ತನ್ನ ಸಹಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ಸದರಿ ಮಹಜರನ್ನು ನಿಪಿ8 ಎಂದು ಗುರುತಿಸಲಾಯಿತು. ಸಾಕ್ಷಿಯನ್ನು ನಿಪಿ8(ಎ) ಎಂದು ಗುರುತಿಸಲಾಯಿತು. ನಿಪಿ8ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ.

ನಾನು ಪೋಲಿಸರಿಗೆ ಕೋರಿಕೆಯ ಮೇರೆಗೆ ಸದರಿ ಮಹಜರಿಗೆ ಸಹಿ ಮಾಡಿರುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು ಮಾ 1 ನ್ನು ಈ ಮೊದಲು ನೋಡಿರುವುದಿಲ್ಲ. ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

ಮುಖ್ಯ ವಿಚಾರಣೆ ಮುಕ್ತಾಯ.

**(ಈ ಹಂತದಲ್ಲಿ *ಸ. ಸ. ಅ.* ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಕೋರಿಕೊಂಡಿದ್ದು, ಕೋರಿಕೆಯನ್ನು ಮನ್ನಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ**

1. ದಿನಾಂಕ 18-11-2023 ರಂದು ನಾನು ಹಾಗೂ ಚಾಸಾ6 ರವರು ಸಿದ್ದಾಪುರ ನಗರದ ಎಂ ಜಿ ರಸ್ತೆಯಲ್ಲಿ ಮಾತನಾಡಿಕೊಂಡಿರುವಾಗ ಸಿದ್ದಾಪುರ ಪೋಲಿಸರವರು ನಮ್ಮನ್ನು ಠಾಣೆಗೆ ಕರೆದುಕೊಂಡು ಹೋಗಿ, ಪ್ರಕರಣದ ವಿಚಾರವನ್ನು ತಿಳಿಸಿ, ನಂತರ ಪೋಲಿಸರು ಠಾಣೆಯಲ್ಲಿ ಆರೋಪಿಯು ಕೆಎ 12 ಕೆ 2899 ನೋಂದಣಿ ಸಂಖ್ಯೆಯ ರಾಯಲ್ ಎನ್ ಫೀಲ್ಡ್ ಬೈಕ್ ಹಾಗೂ ಹೆಲ್ಮೆಟ್ ನ್ನು ಹಾಜರುಪಡಿಸಿದ ಮೇರೆಗೆ ಪೊಲೀಸರು ನನ್ನ ಹಾಗೂ ಚಾಸಾ6 ರವರ ಸಮಕ್ಷಮ ರಾಯಲ್ ಎನ್ ಫೀಲ್ಡ್ ಬೈಕ್ ಹಾಗೂ ಹೆಲ್ಮೆಟ್ ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಈ ಕುರಿತು ನಾನು ಯಾವುದೇ ಹೇಳಿಕೆಯನ್ನು ಪೋಲಿಸರಿಗೆ ಹೇಳಿರುವುದಿಲ್ಲ.

2. ಸಾಕ್ಷಿಗೆ ಹೇಳಿಕೆಯ ಸಂಪೂರ್ಣ ಭಾಗವನ್ನು ಓದಿ ಹೇಳಲಾಗಿ, ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ್ದರಿಂದ ಸದರಿ ಹೇಳಿಕೆಯನ್ನು ನಿಪಿ9 ಎಂದು ಗುರುತಿಸಲಾಯಿತು. ಸದರಿ ಮಹಜರಿನ ಸಂಗತಿಗಳು ಗೊತ್ತಿದ್ದರೂ ಸಹ

ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲು ಮುಕ್ತಾಯ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ–**

ಪಾಟಿ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/–

(ಪ್ರದೀಪ ಪೋತದಾರ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ವಿರಾಜಪೇಟೆ.